BHIMAPPA SOMAPPA NAVI

Digitally signed by BHIMAPPA SOMAPPA NAVI
DN: c=IN, o=KARNATAKA STATE AKKAMAHADEVI WOMENS UNIVERSITY VIJAYAPURA, ou=NA, 2.5.4.20=db7789db39afe1f3d852b09ea3497499328f50a9eb82c5e3eb9b8da79cde486e, postalCode=586108, st=KARNATAKA, serialNumber=a2019af0af54b531e19e9c7b6fbd664dec1569beb802de3505e28213b85e6333, cn=BHIMAPPA SOMAPPA NAVI
Date: 2023.08.12 15:32:42 +05'30'

# ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

(ಹಿಂದಿನ ಪದನಾಮ ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ)

ಕುಲಸಚಿವರ ಕಛೇರಿ, ಜ್ಞಾನಶಕ್ತಿ ಆವರಣ, Registrar Office, Torvi
ವಿಜಯಪುರ ☎:08352-229051 www.kswu.ac.in **Fax: 08352 -229057**

ಸಂಖ್ಯೆ:ಮವಿವಿ/ಶೈಕ್ಷಣಿಕ/ಸಿಂಡಿಕೇಟ್-115/2019-20/1930 ದಿನಾಂಕ:27-8-2019

ಗೆ,
ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ
ಎಲ್ಲ ಸಿಂಡಿಕೇಟ್ ಸದಸ್ಯರುಗಳಿಗೆ

**ವಿಷಯ:** ದಿನಾಂಕ: 19-8-2019 ರಂದು ಬೆಳಿಗ್ಗೆ 11:00 ಗಂಟೆಗೆ ವಿಶ್ವವಿದ್ಯಾನಿಲಯದ "ಜ್ಞಾನಶಕ್ತಿ (ತೊರವಿ) ಆವರಣ, ಆಡಳಿತ ಭವನದ ಸಿಂಡಿಕೇಟ್ ಹಾಲ್"ನಲ್ಲಿ ಜರುಗಿದ ಸಿಂಡಿಕೇಟ್ ಸಾಮಾನ್ಯ ಸಭೆಯ ನಡವಳಿಗಳು.

ಮಾನ್ಯರೆ,

ದಿನಾಂಕ: 19-8-2019 ರಂದು ಬೆಳಿಗ್ಗೆ 11:00 ಗಂಟೆಗೆ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ "ಜ್ಞಾನಶಕ್ತಿ (ತೊರವಿ) ಆವರಣದ ಸಿಂಡಿಕೇಟ್ ಹಾಲ್"ನಲ್ಲಿ ಜರುಗಿದ ಸಿಂಡಿಕೇಟ್ ಸಾಮಾನ್ಯ ಸಭೆಯ ನಡವಳಿಗಳನ್ನು ಈ ಪತ್ರದೊಂದಿಗೆ ಕಳುಹಿಸಲಾಗುತ್ತಿದೆ.

ವಂದನೆಗಳೊಂದಿಗೆ

ತಮ್ಮ ವಿಶ್ವಾಸಿ

**ಕುಲಸಚಿವರು ಹಾಗೂ ಸದಸ್ಯ ಕಾರ್ಯದರ್ಶಿಗಳು**
**ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ವಿಜಯಪುರ**

**ಪ್ರತಿಗಳು:-**

1. ಮಾನ್ಯ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು - 560001.
2. ಸರಕಾರದ ಪ್ರದಾನ ಕಾರ್ಯದರ್ಶಿಗಳು , ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯಗಳು) ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ ಡಾ॥ ಬಿ.ಆರ್.ಅಂಬೇಡ್ಕರ ವೀದಿ, ಬೆಂಗಳೂರು - 560001.
3. ಕಛೇರಿ ಪ್ರತಿ.

These documents are the proceedings of Syndicate Committee approved AAA Committee visits made during assessment Period

## *ಸಿಂಡಿಕೇಟ್ ಪುರವಣಿ ಸಂಖ್ಯೆ : 01*

**ವಿಷಯ:-** ದಿನಾಂಕ:01-08-2019 & 2-08-2019ರಂದು AAA ಸಮಿತಿಯು ವಿಶ್ವವಿದ್ಯಾನಿಲಯಲ್ಲಿ ಭೇಟಿ ನೀಡಿದ್ದು ಸದರಿ ಸಮಿತಿಯ ವರದಿಯನ್ನು ಸಿಂಡಿಕೇಟ್ ಸಭೆಯ ಅವಗಾಹನೆ ಹಾಗೂ ಅನುಮೋದನೆಗಾಗಿ ಮಂಡಿಸಿದೆ.

*ನಿರ್ಣಯ:-* **AAA ಸಮಿತಿಯ ವರದಿಯನ್ನು ಒಪ್ಪಿಕೊಳ್ಳಲಾಯಿತು. ಸಮಿತಿಯ ಶಿಫಾರಸ್ಸುಗಳ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳಲು ಸಭೆ ಸೂಚಿಸಿತು.**

# ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

(ಹಿಂದಿನ ಪದನಾಮ ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ)

ಕುಲಸಚಿವರ ಕಛೇರಿ, ಜ್ಞಾನಶಕ್ತಿ ಆವರಣ, Registrar Office, Torvi

ವಿಜಯಪುರ ☎:08352-229051 www.kswu.ac.in Fax: 08352 -229057


ಸಂಖ್ಯೆ:ಕರಾಅಮವಿವಿ/ಆಡಳಿತ/ಸಿಂಡಿಕೇಟ್/2021-22/2821 ದಿನಾಂಕ: 29/1/2022

ಗೆ,

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ
ಎಲ್ಲ ಸಿಂಡಿಕೇಟ್ ಸದಸ್ಯರುಗಳಿಗೆ

ವಿಷಯ: ದಿನಾಂಕ:12-01-2022 ರಂದು ಮುಂಜಾನೆ 11:30 ಗಂಟೆಗೆ ವಿಶ್ವವಿದ್ಯಾನಿಲಯದ "ಜ್ಞಾನಶಕ್ತಿ (ತೊರವಿ) ಆವರಣ, ಆಡಳಿತ ಭವನದ ಸಿಂಡಿಕೇಟ್ ಹಾಲ್"ನಲ್ಲಿ ಜರುಗಿದ ಸಿಂಡಿಕೇಟ್ ಸಾಮಾನ್ಯ ಸಭೆಯ ನಡವಳಿಗಳು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 28/1/2022

ಮಾನ್ಯರೇ,

ದಿನಾಂಕ: 12-01-2022 ರಂದು ಮುಂಜಾನೆ 11:30 ಗಂಟೆಗೆ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ "ಜ್ಞಾನಶಕ್ತಿ (ತೊರವಿ) ಆವರಣದ ಸಿಂಡಿಕೇಟ್ ಹಾಲ್"ನಲ್ಲಿ ಆಯೋಜಿಸಿದ 131ನೆಯ ಸಿಂಡಿಕೇಟ್ ಸಾಮಾನ್ಯ ಸಭೆಯ ನಡವಳಿಗಳನ್ನು ಈ ಪತ್ರದೊಂದಿಗೆ ಕಳುಹಿಸಲಾಗುತ್ತಿದೆ.

ವಂದನೆಗಳೊಂದಿಗೆ

ತಮ್ಮ ವಿಶ್ವಾಸಿ

ಕುಲಸಚಿವರು ಹಾಗೂ ಸದಸ್ಯ
ಕಾರ್ಯದರ್ಶಿಗಳು
ಕರ್ನಾಟಕ ರಾಜ್ಯ ಅಕ್ಕಮಹಾದೇವಿ
ಮಹಿಳಾ ವಿಶ್ವವಿದ್ಯಾನಿಲಯ ವಿಜಯಪುರ

ಪ್ರತಿಗಳು:-

1. ಮಾನ್ಯ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು – 560001.
2. ಅಪರ ಮುಖ್ಯ ಕಾರ್ಯದರ್ಶಿಗಳು , ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯಗಳು) ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ ಡಾ॥ ಬಿ.ಆರ್.ಅಂಬೇಡ್ಕರ ವೀದಿ, ಬೆಂಗಳೂರು – 560001.
3. ಕಛೇರಿ ಪ್ರತಿ.

## ಸಿಂಡಿಕೇಟ್ ಐಟಂ ಸಂಖ್ಯೆ : 131/23

ವಿಷಯ: ಪ್ರೊ.ಗೀತಾ ಬಾಲಿ ಅವರ ಅಧ್ಯಕ್ಷತೆಯಲ್ಲಿ ರಚಿಸಿದ AAA ಸಮಿತಿಯು ದಿನಾಂಕ: 17-12-2021 & 18-12-2021 ವಿಶ್ವವಿದ್ಯಾನಿಲಯಕ್ಕೆ ಭೇಟಿ ನೀಡಿ ವರದಿಯನ್ನು ಸಲ್ಲಿಸಿದ್ದಾರೆ. ಸದರಿ ವರದಿಯನ್ನು ಸಿಂಡಿಕೇಟ್ ಸಭೆಯ ಅವಗಾಹನೆ ಹಾಗೂ ಅನುಮೋದನೆಗಾಗಿ ಮಂಡಿಸಿದೆ.

*ನಿರ್ಣಯ:-* **AAA ಸಮಿತಿ ವರದಿಯನ್ನು ಅನುಮೋದಿಸಲಾಯಿತು. ಮುಂದುವರೆದು ಸದರಿ ಸಮಿತಿಯು ಸೂಚಿಸಿರುವ ಶಿಫಾರಸ್ಸುಗಳನ್ನು ಅಳವಡಿಕೊಳ್ಳಲು ಸಭೆ ಅನುಮೋದಿಸಿದೆ.**

## ಸಿಂಡಿಕೇಟ್ ಐಟಂ ಸಂಖ್ಯೆ : 131/24

ವಿಷಯ: ಎಲೆಕ್ಟ್ರಿಕಲ್ ವಾಹನಗಳ ಚಾರ್ಜಿಂಗ್ ಸ್ಟೇಷನ್ ಸ್ಥಾಪನೆ ಕುರಿತು.
ಉಲ್ಲೇಖ: ತಿಕೋಟಾ/ಸ.ಕಾ.ನಿ.ಅ(ವಿ)/ತಾ.ಸ/2021-23/3726-27 ದಿನಾಂಕ:6-12-2021

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಎಲೆಕ್ಟ್ರಿಕಲ್ ವಾಹನಗಳ ಚಾರ್ಜಿಂಗ್ ಸ್ಟೇಷನ್ ಸ್ಥಾಪಿಸಲು ಸರಕಾರದ ಆದೇಶವಿದ್ದು, ಅದನ್ನು ಸರಕಾರಿ ಜಾಗದಲ್ಲಿಯೇ ಸ್ಥಾಪಿಸಲು ಉದ್ದೇಶ ಹೊಂದಿರುವ ಕಾರಣ ನಮ್ಮ ವಿಶ್ವವಿದ್ಯಾನಿಲಯದ ಅಧೀನದಲ್ಲಿ ಬರುವ ತೊರವಿ-ತಿಕೋಟಾ ರಸ್ತೆಯ ಬಲಗಡೆ ಇಟ್ಟಂಗಿಹಾಳಗೆ ಹೋಗುವ ರಸ್ತೆಗೆ 1000ಚದರ ಅಡಿ ಸ್ಥಳವನ್ನು ಸೂಕ್ತ ಸ್ಥಳವೆಂದು ಪರಿಗಣಿಸಿ ಒಪ್ಪಿಗೆಗಾಗಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕಾರ್ಯ ಮತ್ತು ಪಾಲನಾ ಉಪ-ವಿಭಾಗ ಹೆಸ್ಕಾಂ ತಿಕೋಟಾ ಇವರು ಉಲ್ಲೇಖಿತ ಪತ್ರದ ಮುಖಾಂತರ ವಿನಂತಿಸಿಕೊಂಡಿರುತ್ತಾರೆ. ಆದ್ದರಿಂದ ಈ ವಿಷಯವನ್ನು ಸಿಂಡಿಕೇಟ್ ಸಭೆಯ ಅವಗಾಹನೆ ಹಾಗೂ ಮುಂದಿನ ಸೂಕ್ತ ನಿರ್ದೇಶನಕ್ಕಾಗಿ ಮಂಡಿಸಿದೆ.

*ನಿರ್ಣಯ:- ಈ ವಿಷಯ ಕುರಿತು ಚರ್ಚಿಸಿ, ಇದು ಮಹಿಳಾ ವಿಶ್ವವಿದ್ಯಾನಿಲಯ ಆಗಿರುವುದರಿಂದ* **ಎಲೆಕ್ಟ್ರಿಕಲ್ ವಾಹನಗಳ ಚಾರ್ಜಿಂಗ್ ಸ್ಟೇಷನ್ ಸ್ಥಾಪನೆ ಪ್ರಸ್ತಾವನೆಯನ್ನು ಸಭೆ ನಿರಾಕರಿಸಿತು. ಇದನ್ನು ಹಿಂಬರಹದಲ್ಲಿ ತಿಳಿಸಲು ಸಭೆ ಸೂಚಿಸಿತು.**

## ಸಿಂಡಿಕೇಟ್ ಐಟಂ ಸಂಖ್ಯೆ : 131/25

ವಿಷಯ: ನಿರಕ್ಷೇಪಣಾ ಪ್ರಮಾಣ ಪತ್ರ ನೀಡಿರುವ ಕುರಿತು.
ಉಲ್ಲೇಖ: ಡಾ. ಪ್ರಕಾಶ ಸಣ್ಣಕ್ಕನವರ ಸಹಾಯಕ ಪ್ರಾಧ್ಯಾಪಕರು, ಶಿಕ್ಷಣ ಅಧ್ಯಯನ ವಿಭಾಗ, ಇವರ ಮನವಿ ಪತ್ರ ದಿನಾಂಕ: 10-12-2021

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಡಾ. ಪ್ರಕಾಶ ಸಣ್ಣಕ್ಕನವರ ಸಹಾಯಕ ಪ್ರಾಧ್ಯಾಪಕರು, ಶಿಕ್ಷಣ ಅಧ್ಯಯನ ವಿಭಾಗ ಇವರಿಗೆ ನವದೆಹಲಿಯ ಇಂದಿರಾಗಾಂಧಿ ರಾಷ್ಟ್ರೀಯ ಮುಕ್ತ ವಿಶ್ವವಿದ್ಯಾಲಯದ ಸಹ ಪ್ರಾಧ್ಯಾಪಕರ ಹುದ್ದೆಗೆ ಅರ್ಜಿ ಸಲ್ಲಿಸಲು ನಿರಕ್ಷೇಪಣಾ ಪ್ರಮಾಣ ಪತ್ರ ನೀಡಲಾಗಿದೆ. ಸದರಿ ವಿಷಯವನ್ನು ಸಿಂಡಿಕೇಟ್ ಸಭೆಯ ಘಟನೋತ್ತರ ಅನುಮೋದನೆಗಾಗಿ ಮಂಡಿಸಿದೆ.

*ನಿರ್ಣಯ:-* **ಡಾ. ಪ್ರಕಾಶ ಸಣ್ಣಕ್ಕನವರ ಸಹಾಯಕ ಪ್ರಾಧ್ಯಾಪಕರು, ಶಿಕ್ಷಣ ಅಧ್ಯಯನ ವಿಭಾಗ ಇವರಿಗೆ ನವದೆಹಲಿಯ ಇಂದಿರಾಗಾಂಧಿ ರಾಷ್ಟ್ರೀಯ ಮುಕ್ತ ವಿಶ್ವವಿದ್ಯಾಲಯದ ಸಹ-ಪ್ರಾಧ್ಯಾಪಕರ ಹುದ್ದೆಗೆ ಅರ್ಜಿ ಸಲ್ಲಿಸಲು ನಿರಾಕ್ಷೇಪಣ ಪತ್ರ ನೀಡಲು ಸಭೆ ಅನುಮೋದಿಸಿದೆ.**

# ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

(ಹಿಂದಿನ ಪದನಾಮ ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ)

ಕುಲಸಚಿವರ ಕಛೇರಿ, ಜ್ಞಾನಶಕ್ತಿ ಆವರಣ. www.kswu.ac.in Registrar Office, Torvi

ಸಂಖ್ಯೆ:ಕರಾಅಮವಿವಿ/ಆಡಳತ/ವಿದ್ಯಾವಿಷಯಕ/2023-24/7547 ದಿನಾಂಕ:27-06-2023

ಇವರಿಗೆ-
ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ
ಎಲ್ಲ ವಿದ್ಯಾವಿಷಯಕ ಪರಿಷತ್‌ನ ಸದಸ್ಯರುಗಳಿಗೆ

**ವಿಷಯ:** ದಿನಾಂಕ: 15-06-2023 ರಂದು ಜರುಗಿದ ವಿದ್ಯಾವಿಷಯಕ ಪರಿಷತ್‌ನ ಸಾಮಾನ್ಯ ಸಭೆಯ ನಡವಳಿಗಳು.
**ಉಲ್ಲೇಖ:** ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 27-06-2023

ಮಾನ್ಯರೆ,

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಜ್ಞಾನಶಕ್ತಿ ಆವರಣದ "ಮಾನ್ಯ ಕುಲಪತಿಗಳ ಗೃಹ ಕಚೇರಿ"ಯಲ್ಲಿ ದಿನಾಂಕ: 15-06-2023 ರಂದು ಗುರುವಾರ ಮುಂಜಾನೆ 11:00 ಗಂಟೆಗೆ ಜರುಗಿದ 2022-23 ನೆಯ ಶೈಕ್ಷಣಿಕ ಸಾಲಿನ 84 ನೇಯ ವಿದ್ಯಾವಿಷಯಕ ಪರಿಷತ್ ಸಾಮಾನ್ಯ ಸಭೆಯ ನಡವಳಿಗಳನ್ನು ಈ ಪತ್ರದೊಂದಿಗೆ ಕಳುಹಿಸಲಾಗಿದೆ.

ತಮ್ಮ ವಿಶ್ವಾಸಿ

27/06/23

ಕುಲಸಚಿವರು
ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ
ವಿಶ್ವವಿದ್ಯಾನಿಲಯ ವಿಜಯಪುರ

<u>ಪ್ರತಿಗಳು:-</u>

1. ಗೌರವಾನ್ವಿತ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು – 560001.
2. ಅಪರ ಮುಖ್ಯ ಕಾರ್ಯದರ್ಶಿಗಳು , ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು) ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ ಡಾ॥ ಬಿ.ಆರ್.ಅಂಬೇಡ್ಕರ್ ವೀದಿ, ಬೆಂಗಳೂರು – 560001.
3. ಕಛೇರಿ ಪ್ರತಿ.

**84 ನೇ ವಿದ್ಯಾವಿಷಯಕ ಪರಿಷತ್ ಸಭೆಯ ( Table Agenda -1 )**

**ವಿಷಯ:** ದಿನಾಂಕ: 31.05.2023 ರಂದು ಜರುಗಿದ ಡೀನರ ಸಭೆಯ ನಡವಳಿಗಳನ್ನು ಅನುಮೋದಿಸುವ ಕುರಿತು

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ: 31.05.2023 ರಂದು ಮಧ್ಯಾಹ್ನ 04.30 ಗಂಟೆಗೆ ಜರುಗಿದ ಎಲ್ಲಾ ನಿಕಾಯಗಳ ಡೀನರ ಸಭೆಯಲ್ಲಿ ಅನುಮೋದನೆಗೊಂಡ ನಡವಳಿಗಳನ್ನು ವಿದ್ಯಾವಿಷಯಕ ಪರಿಷತ್ ಸಭೆಯ ಅವಗಾಹನೆ ಹಾಗೂ ಅನುಮೋದನೆಗಾಗಿ ಮಂಡಿಸಿದೆ.

**ತೀರ್ಮಾನ**

**ದಿನಾಂಕ: 31.05.2023 ರಂದು ಜರುಗಿದ ಡೀನರ ಸಭೆಯ ನಡವಳಿಗಳನ್ನು ಸಭೆಯು ಅವಗಾಹಿಸಿ ಸರ್ವಾನುಮತದಿಂದ ಘಟನೋತ್ತರವಾಗಿ ಅನುಮೋದಿಸಿತು.**

**84 ನೇ ವಿದ್ಯಾವಿಷಯಕ ಪರಿಷತ್ ಸಭೆಯ ( Table Agenda -2 )**

**ವಿಷಯ:** 2023-24ನೇ ಶೈಕ್ಷಣಿಕ ಸಾಲಿನಿಂದ ಮಂಡ್ಯ ಹೊರಾವರಣ ಕೇಂದ್ರದಲ್ಲಿ ಹೊಸದಾಗಿ ಸ್ನಾತಕೋತ್ತರ ಕೋರ್ಸುಗಳನ್ನು ಪ್ರಾರಂಭಿಸುವ ಕುರಿತು.

**ಉಲ್ಲೇಖ:** KSAWU/MEC/PGCourse/2022-23/32 ದಿನಾಂಕ: 05.05.2023

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಮಂಡ್ಯ ಹೋರಾವರಣ ಕೇಂದ್ರದಲ್ಲಿ 2023-24ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ 1) MBA, 2) MSW, 3) M.A Economics, 4) M.Sc Computer Science, 5) M.Sc Physics, 6) Fashion Technology, 7) B.Ed, ಮತ್ತು 8) BPEd & MPEd ಸ್ನಾತಕೋತ್ತರ ಕೋರ್ಸುಗಳನ್ನು ಪ್ರಾರಂಭಿಸಲು ವಿದ್ಯಾವಿಷಯಕ ಪರಿಷತ್ ಸಭೆಯ ಅವಗಾಹನೆ ಹಾಗೂ ಅನುಮೋದನೆಗಾಗಿ ಸಲ್ಲಿಸಿದೆ.

**ತೀರ್ಮಾನ**

**2023-24 ನೇ ಶೈಕ್ಷಣಿಕ ಸಾಲಿನಿಂದ ಮಂಡ್ಯ ಹೊರಾವರಣ ಕೇಂದ್ರದಲ್ಲಿ ಹೊಸದಾಗಿ ಸ್ನಾತಕೋತ್ತರ ಕೋರ್ಸುಗಳನ್ನು ಪ್ರಾರಂಭಿಸುವ ಕುರಿತು ಸವಿಸ್ತಾರವಾಗಿ ಚರ್ಚಿಸಿ MSW ಮತ್ತು M.A Economics ಕೋರ್ಸುಗಳನ್ನು ಪ್ರಾರಂಭಿಸುವುದೆಂದು ಸಭೆಯು ತೀರ್ಮಾನಿಸಿ ಅನುಮೋದಿಸಿತು. ಮುಂದುವರೆದು, ಈ ಕುರಿತು ಸಂಬಂಧಿಸಿದ ವಿಷಯಗಳ ಅಧ್ಯಯನ ಮಂಡಳಿಗಳಿಂದ ಅನುಮೋದನೆ ಪಡೆಯಲು ಸಭೆ ಸೂಚಿಸಿತು.**

**84 ನೇ ವಿದ್ಯಾವಿಷಯಕ ಪರಿಷತ್ ಸಭೆಯ ( Table Agenda -3 )**

**ವಿಷಯ:** ದಿನಾಂಕ: 30-05-2023 ರಂದು ಜರುಗಿದ IQAC ಸಲಹಾ ಸಮಿತಿಯ ನಡವಳಿಗಳನ್ನು ಅನುಮೋದಿಸುವ ಕುರಿತು.

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರದ ಜ್ಞಾನಶಕ್ತಿ ಆವರಣದ ಸಿಂಡಿಕೇಟ್ ಸಭಾಭವನದಲ್ಲಿ ದಿನಾಂಕ: 30-05-2023 ರಂದು ಜರುಗಿದ IQAC ಸಲಹಾ ಸಮಿತಿಯ ನಡವಳಿಗಳನ್ನು

ವಿದ್ಯಾವಿಷಯಕ ಪರಿಷತ್ ಸಾಮಾನ್ಯ ಸಭೆಯ ಅವಗಾಹನೆಗಾಗಿ ಹಾಗೂ ಅನುಮೋದನೆಗಾಗಿ ಮಂಡಿಸಿದೆ.

**ತೀರ್ಮಾನ**

**ದಿನಾಂಕ: 30.05.2023 ರಂದು ಜರುಗಿದ IQAC ಸಲಹಾ ಸಮಿತಿಯ ನಡವಳಿಗಳ ಕುರಿತು ಸವಿಸ್ತಾರವಾಗಿ ಚರ್ಚಿಸಿ, AAA ಸಮಿತಿಯ ವರದಿಯನ್ನು ಒಪ್ಪಿಕೊಂಡು ಅದರಂತೆ ಕ್ರಮಕೈಗೊಳ್ಳಲು ಸಭೆಯು ಅನುಮೋದಿಸಿತು ಮತ್ತು IDP ಗೆ ಸಂಬಂಧಿಸಿದ ಮಾಹಿತಿಯನ್ನು ಸರ್ಕಾರಕ್ಕೆ ಸಲ್ಲಿಸಲು ಸಭೆಯು ಸರ್ವಾನುಮತದಿಂದ ಒಪ್ಪಿ ಅನುಮೋದಿಸಿತು.**

## 84 ನೇ ವಿದ್ಯಾವಿಷಯಕ ಪರಿಷತ್ ಸಭೆಯ ( Table Agenda -4 )

ವಿಷಯ: ಬಿ.ಕಾಂ ಪದವಿಗೆ ಪ್ರವೇಶ ಪಡೆದಿದ್ದ ವಿದ್ಯಾರ್ಥಿನಿಯರ ಪ್ರವೇಶಾತಿ ಶುಲ್ಕ ಪಾವತಿಸುವ ಕುರಿತು.

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಹೊರಾವರಣ ಸ್ನಾತಕ ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರ ಮಂಡ್ಯದಲ್ಲಿ 2022-23 ನೇ ಶೈಕ್ಷಣಿಕ ಸಾಲಿನ ಸ್ನಾತಕ ಬಿ.ಕಾಂ ಪದವಿಗೆ ಪ್ರವೇಶ ಪಡೆದಿದ್ದ ವಿದ್ಯಾರ್ಥಿನಿಯರಾದ ಸಹನ ಬಿ.ಹೆಚ್ ಪುಣ್ಯಶ್ರೀ ಯು.ಎಸ್ ಮತ್ತು ತನುಶ್ರೀ ಎಂ.ಕೆ ಇವರುಗಳ 2022-23 ನೇ ಸಾಲಿನಲ್ಲಿ ಪ್ರವೇಶ ಪಡೆದಿದ್ದು ಕಡಿಮೆ ವಿದ್ಯಾರ್ಥಿಗಳು ಇರುವ ಕಾರಣ ಸದರಿ ಕೋರ್ಸುಗಳನ್ನು ವಿಶ್ವವಿದ್ಯಾನಿಲಯ ಆರಂಭಿಸಿರುವುದಿಲ್ಲ ಸದರಿ ಪ್ರವೇಶದ ಶುಲ್ಕವನ್ನು ಪಾವತಿಸಲು ವಿದ್ಯಾರ್ಥಿನಿಯರು ಕೋರಿರುತ್ತಾರೆ. ಆದರೆ ವಿಶ್ವವಿದ್ಯಾನಿಲಯದ ಪ್ರವೇಶ ಶುಲ್ಕದ ಪಟ್ಟಿಯಲ್ಲಿ ಒಂದು ಸಾರಿ ಭರ್ತಿ ಮಾಡಿದ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರುಪಾವತಿಸಲಾಗುವುದಿಲ್ಲವೆಂಬ ನಿಯಮವಿರುತ್ತದೆ. ಕಾರಣ ಶುಲ್ಕವನ್ನು ಮರುಪಾವತಿಸುವ ಕುರಿತು ವಿದ್ಯಾವಿಷಯಕ ಪರಿಷತ್ ಸಭೆಯ ಅವಗಾಹನೆಗಾಗಿ ಹಾಗೂ ಅನುಮೋದನೆಗಾಗಿ ಮಂಡಿಸಲಾಗಿದೆ.

**ತೀರ್ಮಾನ**

**2022-23 ನೇ ಶೈಕ್ಷಣಿಕ ಸಾಲಿನ ಸ್ನಾತಕ ಬಿ.ಕಾಂ ಪದವಿಗೆ ಪ್ರವೇಶ ನೀಡಲಾಗಿದ್ದು, ಕೇವಲ ಮೂರೇ ವಿದ್ಯಾರ್ಥಿನಿಯರು ಪ್ರವೇಶ ಪಡೆದಿದ್ದು, ಸದರಿ ಕೋರ್ಸ್‌ನ್ನು ತಾಂತ್ರಿಕ ಕಾರಣಗಳಿಂದ ನಡೆಸಲಿಲ್ಲವಾದ್ದರಿಂದ ಮತ್ತು ಶುಲ್ಕವನ್ನು ಪಡೆದು ಸೇವೆಯನ್ನು ನೀಡಿಲ್ಲವಾದ್ದರಿಂದ ಇದನ್ನು ವಿಶೇಷ ಪ್ರಕರಣವೆಂದು ತೀರ್ಮಾನಿಸಿ ಶುಲ್ಕವನ್ನು ಮರುಪಾವತಿಸುವುದೆಂದು ಸಭೆಯು ಸರ್ವಾನುಮತದಿಂದ ಒಪ್ಪಿ ಅನುಮೋದಿಸಿತು.**

ಅಧ್ಯಕ್ಷರ ಅಪ್ಪಣೆಯ ಮೇರೆಗೆ

1) **ಶ್ರೀ. ನಾನಾಗೌಡ ಪಾಟೀಲರವರು ವಿಷಯ ಪ್ರಸ್ತಾಪಿಸಿ ಬಹಳ ಹಿಂದಿನಿಂದ ಫೇಲಾದ ವಿದ್ಯಾರ್ಥಿನಿಯರಿಗೆ ಗೋಲ್ಡನ್ ಚಾನ್ಸ್‌ಗಾಗಿ ಅಧಿಸೂಚನೆ ನೀಡಲಾಗಿತ್ತು ಆದರೆ ಈಗ ಇನ್ನಷ್ಟು ವಿದ್ಯಾರ್ಥಿನಿಯರು ಪರೀಕ್ಷೆ ತೆಗೆದುಕೊಳ್ಳಲು ಉತ್ಸುಕರಿರುವುದುದರಿಂದ ಮತ್ತೊಮ್ಮೆ ಕ್ರಮವಹಿಸಲು ಪ್ರಸ್ತಾವನೆ ಸಲ್ಲಿಸಿದ್ದನ್ನು ಸಭೆಯು ಒಪ್ಪಿ ಅನುಮೋದಿಸಿತು.**
2) **ಶ್ರೀ. ಅರವಿಂದ ಬಿರಾದಾರ ಅವರು, UUCMS ಕಾರ್ಯಗಳು, ಪರೀಕ್ಷಾ ಸಂಭಾವನೆಗಳನ್ನು, ಶುಲ್ಕ ಹೊಂದಾಣಿಕೆ, ಮೌಲ್ಯಮಾಪನ ಕಾರ್ಯಗಳು ಹಾಗೂ ಅರ್ಹತಾ ಪ್ರಮಾಣ ಪತ್ರ ಕುರಿತಾದ ವಿಷಯ ಪ್ರಸ್ತಾಪಿಸಿದ್ದನ್ನು ಸಭೆ ಗಂಭೀರವಾಗಿ ಚರ್ಚಿಸಿ, ಸದರಿ ವಿಷಯಗಳ ಕುರಿತ ತ್ವರಿತ ಕ್ರಮಕೈಗೊಳ್ಳುವುದಕ್ಕಾಗಿ ಸಭೆ ಒಪ್ಪಿ ಅನುಮೋದಿಸಿತು.**